ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 1/4/2021

# ದೇವೇಗೌಡ ದಂಪತಿಗೆ ಕೋವಿಡ್



ಬೆಂಗಳೂರು: ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಮತ್ತು ಅವರ ಪತ್ನಿ ಚೆನ್ನಮ್ಮ ಅವರಿಗೆ ಕೋವಿಡ್ ತಗುಲಿರುವುದು ದೃಢಪಟ್ಟಿದೆ. ಇಬ್ಬರೂ ನಗರದ ಮಣಿಪಾಲ ಆಸ್ಪತ್ರೆಗೆ ದಾಖಲಾಗಿದ್ದಾರೆ.

ಚೆನ್ನಮ್ಮ ಅವರಿಗೆ ಜ್ವರ ಕಾಣಿಸಿಕೊಂಡಿತ್ತು. ಅವರ ಗಂಟಲು ಮತ್ತು ಮೂಗಿನ ದ್ರವದ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಲಾಗಿತ್ತು. ಮಂಗಳವಾರ ಸಂಜೆ ವರದಿ ಬಂದಿದ್ದು ಕೋವಿಡ್ ಸೋಂಕು ತಗುಲಿರುವುದು ದೃಢಪಟ್ಟಿತ್ತು.

5ನೇ ಪುಟ ನೋಡಿ

# ದೇವೇಗೌಡ ದಂಪತಿಗೆ ಕೋವಿಡ್

ಒಂದನೇ ಪುಟದಿಂದ...

ದೇವೇಗೌಡ ಅವರ ಗಂಟಲು ಮತ್ತು ಮೂಗಿನ ದ್ರವದ ಮಾದರಿಗಳನ್ನು ಬುಧವಾರ ಬೆಳಿಗ್ಗೆ ಸಂಗ್ರಹಿಸಿ ರ್‍ಯಾಪಿಡ್ ಆ್ಯಂಟಿಜೆನ್ ಕಿಟ್ ಮೂಲಕ ಪರೀಕ್ಷಿಸಲಾಗಿದೆ. ಈ ಪರೀಕ್ಷೆಯಲ್ಲಿ ಸೋಂಕು ದೃಢಪಟ್ಟಿದೆ. ಪ್ರತ್ಯೇಕ ಮಾದರಿ ಸಂಗ್ರಹಿಸಿ ಆರ್‌ಟಿ–ಪಿಸಿಆರ್ ಪರೀಕ್ಷೆಗಾಗಿ ರವಾನಿಸಲಾಗಿದೆ ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

ಸೋಂಕು ತಗುಲಿರುವುದನ್ನು ದೃಢಪಡಿಸಿ ಟ್ವೀಟ್ ಮಾಡಿರುವ ದೇವೇಗೌಡ, ಕೆಲವು ದಿನಗಳಿಂದ ತಮ್ಮ ಸಂಪರ್ಕಕ್ಕೆ ಬಂದವರು ಕೋವಿಡ್ ಪತ್ತೆ ಪರೀಕ್ಷೆ ಮಾಡಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ.

**ಆರೋಗ್ಯ ವಿಚಾರಿಸಿದ ಪ್ರಧಾನಿ:** ದೇವೇಗೌಡರಿಗೆ ದೂರವಾಣಿ ಕರೆಮಾಡಿದ ಪ್ರಧಾನಿ ನರೇಂದ್ರ ಮೋದಿ, ದಂಪತಿಯ ಆರೋಗ್ಯ ವಿಚಾರಿಸಿದ್ದಾರೆ. ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಸೇರಿದಂತೆ ಹಲವು ಮುಖಂಡರು ದೇವೇಗೌಡ ದಂಪತಿ ಬೇಗ ಗುಣಮುಖರಾಗಿ ಬರಲಿ ಎಂದು ಹಾರೈಸಿ ಟ್ವೀಟ್ ಮಾಡಿದ್ದಾರೆ.